ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ
ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

<u>ಸಿ.ಸಿ. ಸಂಖ್ಯೆ: **1577/2019**</u>

ಫಿರ್ಯಾದಿದಾರರು: ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

ವಿರುದ್ಧ,

ಆರೋಪಿ/ಗಳು ಶಿವಣ್ಣೇಗೌಡ
ಬಿನ್ ಲೇಟ್ ಚಿಕ್ಕಹೈದೇಗೌಡ
ಸುಮಾರು 70 ವರ್ಷ ವಯಸ್ಸು,
ವಾಸ: ವಡೆಯರ ಹೊಸಹಳ್ಳಿ ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

<u>ದೋಷಾರೋಪಣೆ</u>

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು, ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:

1. ದಿನಾಂಕ 14.03.2019 ರಂದು ಮಧ್ಯಾಹ್ನ 14.40 ಗಂಟೆ ಸಮಯದಲ್ಲಿ ಹುಣಸೂರು ತಾಲ್ಲೂಕು ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದು ವಡೆಯರ ಹೊಸಹಳ್ಳಿ ಗ್ರಾಮದಲ್ಲಿ ಆರೋಪಿಯಾದ ನೀವು ನಿಮ್ಮ ಚಿಲ್ಲರೆ ಅಂಗಡಿ ಮುಂಭಾಗದ ಖಾಲಿ ಜಾಗದಲ್ಲಿ ಹಣ ಸಂಪಾದನೆ ಮಾಡುವ ಉದ್ದೇಶದಿಂದ 1132/- ರೂ ಬೆಲೆ ಬಾಳುವ 180 ಎಂಎಲ್ ಅಳತೆಯ 12 ಓಲ್ಡ್ ತವೇರನ್ ವಿಸ್ಕಿ ಸಾಚೇಟ್ ಮತ್ತು 90 ಎಂಎಲ್ ಅಳತೆಯ 8 ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಸಾಚೇಟ್ ಗಳನ್ನು ಒಂದು ಪ್ಲಾಸ್ಟಿಕ್ ಚೀಲದಲ್ಲಿ ಅಕ್ರಮವಾಗಿ ಯಾವುದೇ ರಹದಾರಿ ಇಲ್ಲದೇ ಮತ್ತು ಯಾವುದೇ ಅಧಿಕೃತ ಅಂಗಡಿಯ ಬಿಲ್ಲುಗಳು ಇಲ್ಲದೇ ನಿಮ್ಮ ಬಳಿ ಸಂಗ್ರಹಿಸಿ ಇಟ್ಟುಕೊಂಡಿರುತ್ತೀರೆಂದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 32 ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಮಾಡುವ

ಉದ್ದೇಶವುಳ್ಳವರಾಗಿ, ಸಾರ್ವಜನಿಕ ಸ್ಥಳದಲ್ಲಿ ಹಣ ಸಂಪಾದನೆ ಮಾಡುವ ಉದ್ದೇಶದಿಂದ 1132/- ರೂ ಬೆಲೆ ಬಾಳುವ 180 ಎಂಎಲ್ ಅಳತೆಯ 12 ಓಲ್ಡ್ ತವೇರನ್ ವಿಸ್ಕಿ ಸಾಚೇಟ್ ಮತ್ತು 90 ಎಂಎಲ್ ಅಳತೆಯ 8 ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಸಾಚೇಟ್ ಗಳನ್ನು ಒಂದು ಪ್ಲಾಸ್ಟಿಕ್ ಚೀಲದಲ್ಲಿಅಕ್ರಮವಾಗಿ ತಮ್ಮ ಬಳಿ ಸಂಗ್ರಹಿಸಿಕೊಂಡು ಸಾರ್ವಜನಿಕರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದೀರೆಂದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 34 ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆರೋಪಣೆಯು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆರೋಪಣೆಗೆ ಆರೋಪಿಯಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ಪೂಜಾ ಬೆಳಕೇರಿ)**

ದಿನಾಂಕ: **21-03-2024**

ಅಪರ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು**,** ಹುಣಸೂರು**.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

<u>ಸಿ.ಸಿ. ಸಂಖ್ಯೆಃ **1577/2019**</u>

| | |
|---|---|
| ಫಿರ್ಯಾದಿದಾರರುಃ | ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ,<br>ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ. |
| | ವಿರುದ್ಧ, |
| ಆರೋಪಿ/ಗಳು | ಶಿವಣ್ಣೇಗೌಡ<br>ಬಿನ್ ಲೇಟ್ ಚಿಕ್ಕಹೈದೇಗೌಡ |

<u>ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ</u>

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ, ವಿಚಾರಣೆಯಾಗಬೇಕೆನ್ನುವಿರೋ?

ಉತ್ತಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

(ಪೂಜಾ ಬೆಳಕೇರಿ)

ದಿನಾಂಕಃ **21-03-2024**

ಅಪರ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.